# ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಶಹಾಬಾದ

**CC No.897/2024**
**CW: 01 P W : 03**
**ಸಾಕ್ಷಿಯನ್ನು ಪ್ರಮಾಣೀಕರಿಸಿದ ದಿನಾಂಕ : 22.11.2025**

| | |
|---|---|
| ಹೆಸರು | : ಯಂಕಪ್ಪ ಅಲಗುಂಟಿ |
| ತಂದೆಯ ಹೆಸರು | : ನಾಗಪ್ಪ |
| ವಯಸ್ಸು | : 58 |
| ಉದ್ಯೋಗ | : ಕೂಲಿ |
| ವಾಸಸ್ಥಳ | : ಶಹಾಬಾದ |

**ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ಚಾಸಾ 2 ಹಾಗೂ ಚಾಸಾ-3 ಇವರ ಪರಿಚಯ ನನಗೆ ಇರುತ್ತದೆ. ಈ ಹಂತದಲ್ಲಿ ಕಡತದಲ್ಲಿರುವ ಒಂದು ದಾಖಲೆಯನ್ನು ತೋರಿಸಿದ್ದು, ಅದು ಜಪ್ತಿ ಪಂಚನಾಮೆಯಾಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿದಾರರ ಹೆಬ್ಬಟ್ಟಿನ ಗುರುತನ್ನು ನೋಡಿ ಗುರುತಿಸುತ್ತಾರೆ. ಯಾವ ಕಾರಣಕ್ಕೆ ದಾಖಲೆಯ ಮೇಲೆ ಹೆಬ್ಬಟ್ಟಿನ ಗುರುತನ್ನು ಹಾಕಿರುತ್ತೇನೆ ಎಂದು ಹೇಳಲು ಬರುವುದಿಲ್ಲ.

ಯಾವ ದಿನಾಂಕ ಮತ್ತು ಸಮಯದಲ್ಲಿ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದು ನನಗೆ ಹೇಳಲು ಬರುವುದಿಲ್ಲ. ಸದರಿ ಪಂಚನಾಮೆಯನ್ನು ಎಷ್ಟು ವರ್ಷಗಳ ಹಿಂದೆ ಮಾಡಿರುತ್ತಾರೆ ಎಂದು ನನಗೆ ಹೇಳಲು ಬರುವುದಿಲ್ಲ. ನನ್ನ ಸಮಕ್ಷಮದಲ್ಲಿ ನಿ.ಪಿ.1 ರಂತೆ ಪಂಚನಾಮೆ ಜರುಗಿಸಿರುವುದಿಲ್ಲ.

**(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**ಪಾಟೀ ಸವಾಲು : ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ದಿ: 22/04/2023 ರಂದು ಸಾಯಂಕಾಲ 5.30 ರಿಂದ 6.30 ರವರೆಗೆ ಶಹಾಬಾದ ನಗರದ ಸ್ಟೇಷನ್ ತಾಂಡಾದ ಮನೆಯೊಂದರಲ್ಲಿ ನನ್ನ ಹಾಗೂ ಚಾಸಾ-2 ಇವರ ಸಮಕ್ಷಮದಲ್ಲಿ ಚಾಸಾ-3 ರವರು ನಿ.ಪಿ.1 ರಂತೆ ಪಂಚನಾಮೆಯನ್ನು ಮಾಡಿ 5 ಲೀಟರ ಸಾಮರ್ಥ್ಯವುಳ್ಳ ಎರಡು ಪ್ಲಾಸ್ಟಿಕ ಕ್ಯಾನುಗಳಲ್ಲಿ ತಲಾ ಒಂದರಲ್ಲಿ 5 ಲೀಟರನಂತೆ ಒಟ್ಟು 10 ಲೀಟರ ಕಳ್ಳಬಟ್ಟಿ ಸಾರಾಯಿ ಹಾಗೂ 20 ಲೀಟರ ಸಾಮರ್ಥ್ಯದ ಒಂದು ಪ್ಲಾಸ್ಟಿಕ ಬ್ಯಾರಲನಲ್ಲಿ ಅಂದಾಜು 150 ಲೀಟರನಷ್ಟು ಬೆಲ್ಲದ ಕೊಳೆಯನ್ನು ಜಪ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. 180 ಎಮ್.ಎಲ್.ನ ಬಾಟಲಿನಲ್ಲಿ ಕಳ್ಳಭಟ್ಟಿ ಸರಾಯಿ ಹಾಗೂ ಒಂದು ಲೀಟರ ಪ್ಲಾಸ್ಟಿಕ ಬಾಟಲಿಯಲ್ಲಿ ಬೆಲ್ಲದ ಕೊಳೆಯನ್ನು ರಾಸಾಯನಿಕ ಪರೀಕ್ಷೆಗೆ ತೆಗೆದುಕೊಂಡಿರುತ್ತಾರೆ ಎಂದರೆ

ಸರಿಯಲ್ಲ. ನಿ.ಪಿ.1 ರಲ್ಲಿ ಬರೆದಿರುವ ಸಂಗತಿಗಳ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ**

ಈ ಹಂತದಲ್ಲಿ ಆರೋಪಿ ಪರ ವಕೀಲರು ಪಾಟೀ ಸವಾಲು ಏನೂ ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ : **ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ ಇದೆ.**

**Sd/-**
**ಪ್ರ.ದ.ನ್ಯಾ.ದಂ.ಗಳು, ಶಹಾಬಾದ**